# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 1148 (1333) |
| ಮಾನ್ಯ ಸದಸ್ಯರ ಹೆಸರು | ಡಾ: ಧನಂಜಯ ಸರ್ಜಿ(ಪದವಿಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 22.08.2025 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಶಿವಮೊಗ್ಗ ಜಿಲ್ಲೆಗೆ ಸಂಬಂಧಿಸಿದಂತೆ ಹಿಂದುಳಿದ ವರ್ಗಗಳ ವಿವಿಧ ಸಮುದಾಯ ಭವನ/ವಿದ್ಯಾರ್ಥಿನಿಲಯಗಳಿಗೆ 2019-20 ನೇಸಾಲಿನಿಂದ 2025-26 ನೇ ಸಾಲಿನವರೆಗೆ ಮಂಜೂರಾದ ಬಿಡುಗಡೆಯಾದ ಮತ್ತು ಬಿಡುಗಡೆಗೆ ಬಾಕಿ ಇರುವ ಅನುದಾನ ಎಷ್ಟು; | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ವಿವಿಧ ಸಂಘ-ಸಂಸ್ಥೆಗಳಿಗೆ ಸಮುದಾಯ ಭವನ/ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣಕ್ಕೆ 2019-20 ರಿಂದ 2025-26 ನೇಸಾಲಿನ ವರೆಗೆ ಮಂಜೂರಾದ, ಬಿಡುಗಡೆಯಾದ ಮತ್ತು ಬಿಡುಗಡೆಗೆ ಬಾಕಿ ಇರುವ ಅನುದಾನದ ವರ್ಷವಾರು ವಿವರಗಳು ಈ ಕೆಳಗಿನಂತಿದೆ. (ಕೋಷ್ಟಕ ಕೆಳಗೆ) |
| ಆ) | ಬಾಕಿ ಅನುದಾನ ಬಿಡುಗಡೆ ಆಗದೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ಸಮುದಾಯ ಭವನ/ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣಕ್ಕೆ ಸರ್ಕಾರದಿಂದ ಮಂಜೂರಾದ ಅನುದಾನವನ್ನು, ಸದರಿ ಯೋಜನೆಯಡಿ ಆಯಾ ಆರ್ಥಿಕ ವರ್ಷಗಳಲ್ಲಿ ಒದಗಿಸುವ ಅನುದಾನ ಹಾಗೂ ರಾಜ್ಯದ ಒಟ್ಟಾರೆ ಬೇಡಿಕೆಯನುಸಾರ ಮಾರ್ಗಸೂಚಿಗಳನ್ವಯ ಕಟ್ಟಡ ಕಾಮಗಾರಿಯ ಪ್ರಗತಿಯ ವಿವಿಧ ಹಂತಗಳಲ್ಲಿ 3 ಕಂತುಗಳಾಗಿ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದೆ.<br><br>ಈ ಸಂಬಂಧ ಈಗಾಗಲೇ ಮೊದಲನೇ /ಎರಡನೇ ಕಂತಾಗಿ ಬಿಡುಗಡೆಯಾಗಿರುವ ಅನುದಾನಕ್ಕೆ ಹಣ ಬಳಕೆ ಪ್ರಮಾಣ ಪತ್ರ ಮತ್ತು ಕಟ್ಟಡ ನಿರ್ಮಾಣದ ಪ್ರಗತಿ ವರದಿ ಸಲ್ಲಿಸಿದ್ದಲ್ಲಿ, ಮಾರ್ಗಸೂಚಿಗಳನ್ವಯ ಪರಿಶೀಲಿಸಿ ಈ ಯೋಜನೆಯಡಿ ಲಭ್ಯವಿರುವ ಅನುದಾನ ಹಾಗೂ ರಾಜ್ಯದ ಒಟ್ಟಾರೆ ಬೇಡಿಕೆಯನ್ನಾಧರಿಸಿ ಎರಡನೇ /ಮೂರನೇ ಕಂತಿನ ಅನುದಾನವನ್ನು ಬಿಡುಗಡೆ ಮಾಡಲು ಕ್ರಮ ವಹಿಸಲಾಗುವುದು. |
| ಇ) | ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಅನುದಾನ ಬಿಡುಗಡೆ ಮಾಡಲಾಗುವುದು? | |

(ರೂ.ಲಕ್ಷಗಳಲ್ಲಿ)

| ಕ್ರ. ಸಂ | ಮಂಜೂರಾದ ವರ್ಷ | ಸಮುದಾಯ ಭವನ / ವಿದ್ಯಾರ್ಥಿನಿಲಯಗಳ ಸಂಖ್ಯೆ | ಮಂಜೂರಾದ ಮೊತ್ತ | ಬಿಡುಗಡೆಯಾದ ಮೊತ್ತ | ಬಿಡುಗಡೆಗೆ ಬಾಕಿ ಇರುವ ಮೊತ್ತ |
|---|---|---|---|---|---|
| 1. | 2019-20 | 18 | 1780.00 | 1645.50 | 134.50 |
| 2. | 2020-21 | 05 | 735.00 | 688.50 | 46.50 |
| 3. | 2021-22 | 08 | 710.00 | 595.00 | 115.00 |
| 4. | 2022-23 | 05 | 810.00 | 727.50 | 82.50 |
| 5. | 2023-24 | 08 | 1050.00 | 575.00 | 475.00 |
| 6. | 2024-25 | 02 | 300.00 | 75.00 | 225.00 |
| 7. | 2025-26 | 05 | 280.00 | 0.00 | 280.00 |

ಕಡತ ಸಂಖ್ಯೆ: ಹಿಂವಕ 900 ಬಿಎಂಎಸ್ 2025

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.